154ನೇ ಅ- ನಿ-72 = (48)
LRM
04072

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ರವರು ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಕಿವುಡ ಮತ್ತು ಮೂಕ ಮಕ್ಕಳಿಗಾಗಿ ಮೈಸೂರು, ಕಲಬುರಗಿ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಮತ್ತು ವಿವಿಧ ಜಿಲ್ಲೆಗಳಲ್ಲಿ ಉಚಿತ ವಸತಿಯುತ ಶಾಲೆಯನ್ನು ಇಲಾಖೆಯಿಂದ ಪ್ರಾರಂಭಿಸಿರುತ್ತದೆ. ಆದರೆ ಬೆಂಗಳೂರು ನಗರದಲ್ಲಿ ಇಲಾಖೆಯಿಂದ ಕಿವುಡ ಮೂಕ ಮಕ್ಕಳಿಗಾಗಿ ವಸತಿ ಶಾಲೆ ಪ್ರಾರಂಭಿಸಿರುವುದಿಲ್ಲ. ಈ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಿಗೆ ವಸತಿ ಶಾಲೆ ಪ್ರಾರಂಭಿಸಲು ವಿವಿಧ ಅಧಿವೇಶನಗಳಲ್ಲಿ ಪ್ರಸ್ತಾಪಿಸಿದ್ದು, ಮಾನ್ಯ ಸಚಿವರು ಭರವಸೆ ಸಂಖ್ಯೆ:ಮಮಇ 155 ಪಿಹೆಚ್‌ಪಿ 2017 ದಿನಾಂಕ:05.12.2023 ಇಲಾಖೆಯಿಂದ 2023-24 ರಿಂದಲೇ ವಸತಿ ಶಾಲೆ ಪ್ರಾರಂಭಿಸುವುದಾಗಿ ಸದನದಲ್ಲಿ ಭರವಸೆ ನೀಡಿರುತ್ತಾರೆ. ಆದರೆ ಈವರೆವಿಗೂ ಆರ್ಥಿಕ ಇಲಾಖೆ ಕಡತ ಸಂಖ್ಯೆ:ಮಮಇ 67 ಪಿಹೆಚ್‌ಪಿ 2023 ರಲ್ಲಿ ವಸತಿ ಶಾಲೆ ಪ್ರಾರಂಭಿಸಲು ಅನುಮೋದನೆ ನೀಡಿರುವುದಿಲ್ಲ. ಪರಿಶಿಷ್ಟ ಜಾತಿ ಪಂಗಡ ಹಾಗೂ ಅಲ್ಪಸಂಖ್ಯಾತ ಕಿವುಡ ಮೂಕ ವಿದ್ಯಾರ್ಥಿಗಳಿಗೆ ಕೂಡಲೇ ಇಲಾಖೆಯಿಂದ ವಸತಿ ಶಾಲೆ ಪ್ರಾರಂಭಿಸಿ ಹೆಚ್ಚಿನ ಮಕ್ಕಳನ್ನು ದಾಖಲಿಸಿಕೊಳ್ಳುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳ ಗಮನ ಸೆಳೆಯುತ್ತೇನೆ.

**ಉತ್ತರ**

ಸರ್ಕಾರದ ಆದೇಶ ಸಂಖ್ಯೆ: ಮಮಇ 389 ಪಿಹೆಚ್‌ಪಿ 2014, ಬೆಂಗಳೂರು, ದಿನಾಂಕ:23.07.2016 ರನ್ವಯ ಹಂಸಧ್ವನಿ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯನ್ನು ಸರ್ಕಾರದ ವಶಕ್ಕೆ ಪಡೆದು ಹಾಲಿ ಇರುವ ಸಿಬ್ಬಂದಿಗಳ ಸಮೇತ, ಚರ ಸ್ಥಿರ ಆಸ್ತಿಗಳನ್ನೊಳಗೊಂಡಂತೆ ಸರ್ಕಾರಿ ವಸತಿಯುತ ಶಾಲೆಯನ್ನಾಗಿ ನಿಯಮಾನುಸಾರ ಮಾರ್ಪಡಿಸಲು ಮಂಜೂರಾತಿಯನ್ನು ನೀಡಿ ಆದೇಶಿಸಲಾಗಿರುತ್ತದೆ. ಹಂಸಧ್ವನಿ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯನ್ನು ವಸತಿಯುತ ಶಾಲೆಯನ್ನಾಗಿ ಮಾರ್ಪಡಿಸಲು ಹಾಗೂ ಅವಶ್ಯವಿರುವ ವಿವಿಧ ವರ್ಗದ ಹುದ್ದೆಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 67 ಪಿಹೆಚ್‌ಪಿ 2023, ದಿನಾಂಕ: 12.12.2024ರನ್ವಯ ಸದರಿ ಶಾಲೆಯನ್ನು ವಸತಿಯುತ ಶಾಲೆಯನ್ನಾಗಿ ಮಾರ್ಪಡಿಸಿ, ಈಗಾಗಲೇ ಮಂಜೂರಾಗಿರುವ 20 ಹುದ್ದೆಗಳಲ್ಲಿ 08 ಹುದ್ದೆಗಳನ್ನು ರದ್ದುಪಡಿಸಿ 05 ಹೊಸ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

**ಸಂಖ್ಯೆ: ಮಮಇ 313 ಪಿಹೆಚ್‌ಪಿ 2024**

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

Scanned with OKEN Scanner